# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 375 |
| ಮಾನ್ಯ ಸದಸ್ಯರ ಹೆಸರು | ಶ್ರೀ ಎಂ.ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 07.07.2023 |
| ಉತ್ತರಿಸುವ ಸಚಿವರು | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಗೊಲ್ಲ ಸಮುದಾಯದ ಸ್ಥಿತಿಗತಿಗಳ ಬಗ್ಗೆ ಸರ್ಕಾರದಲ್ಲಿ ಮಾಹಿತಿ ಇದೆಯೇ; ರಾಜ್ಯದಲ್ಲಿ ಒಟ್ಟು ಎಷ್ಟು ಗೊಲ್ಲರಹಟ್ಟಿಗಳಿವೆ; ಹಿಂದುಳಿದ ಜನಾಂಗವಾಗಿರುವ ಗೊಲ್ಲ ಸಮುದಾಯವು ಸಾಮಾಜಿಕವಾಗಿ, ಶೈಕ್ಷಣಿಕವಾಗಿ, ಆರ್ಥಿಕವಾಗಿ ಮತ್ತು ರಾಜಕೀಯವಾಗಿ ಅತಿ ಹಿಂದುಳಿದ<br>ಸಮಾಜವಾಗಿರುವುದರಿಂದ ಈ ಸಮುದಾಯವನ್ನು ಸಮಾಜದ ಮುಂಚೂಣಿಗೆ ತರಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; | ರಾಜ್ಯದಲ್ಲಿರುವ ಗೊಲ್ಲ ಸಮುದಾಯದ ಸ್ಥಿತಿಗತಿಗಳ ಬಗ್ಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಮಾಹಿತಿ ಲಭ್ಯವಿರುವುದಿಲ್ಲ.<br><br>ಜಿಲ್ಲೆಗಳಿಂದ ಪಡೆದಿರುವ ಮಾಹಿತಿಯಂತೆ ರಾಜ್ಯದಲ್ಲಿ ಅಂದಾಜು 1141 ಗೊಲ್ಲರಹಟ್ಟಿಗಳಿವೆ.<br><br>ಸರ್ಕಾರದ ಆದೇಶ ಸಂಖ್ಯೆ. ಪಿಹೆಚ್ಎಸ್ 262 ಎಸ್ಇಡಬ್ಲ್ಯೂ 65, ದಿನಾಂಕ : 01-02-1966 ರಲ್ಲಿ ಅಲೆಮಾರಿ/ ಅರೆ ಅಲೆಮಾರಿ ಜನಾಂಗದವರೆಂದು ಗುರುತಿಸಿರುವ ಜಾತಿಗಳಲ್ಲಿ ಗೊಲ್ಲ ಸಮುದಾಯವು ಸೇರಿರುತ್ತದೆ.<br><br>ಈ ಅಲೆಮಾರಿ/ ಅರೆ ಅಲೆಮಾರಿ ಜನಾಂಗದವರ ಸರ್ವತೋಮುಖ ಅಭಿವೃದ್ಧಿಗಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾವತಿಯಿಂದ ಮತ್ತು ಕರ್ನಾಟಕ ಅಲೆಮಾರಿ/ ಅರೆ ಅಲೆಮಾರಿ ಅಭಿವೃದ್ಧಿ ನಿಗಮದಿಂದ ಈ ಕೆಳಕಂಡ ಶೈಕ್ಷಣಿಕ, ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br><br>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಕಾರ್ಯಕ್ರಮಗಳು :<br>1) ಮೆಟ್ರಿಕ್-ಪೂರ್ವ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹ ಧನ<br>2) ಮೆಟ್ರಿಕ್-ನಂತರದ ವಿದ್ಯಾರ್ಥಿಗಳಿಗೆ ಅರ್ಹತಾ ವಿದ್ಯಾರ್ಥಿವೇತನ<br>3) ಆಶ್ರಮ ಶಾಲೆಗಳ ನಿರ್ವಹಣೆ<br>4) ಪ್ರತಿಷ್ಠಿತ ಶಾಲೆಗಳಲ್ಲಿ ಪ್ರವೇಶಾವಕಾಶ (ನವೀಕರಣ ವಿದ್ಯಾರ್ಥಿಗಳು)<br>5) ಮೂಲಭೂತ ಸೌಕರ್ಯಗಳು<br>6) ವಸತಿ ಸೌಲಭ್ಯ<br>7) ನಿವೇಶನ ಹಂಚಿಕೆಗಾಗಿ ಜಮೀನು ಖರೀದಿ<br>8) ಅರಿವು ಮೂಡಿಸುವ ಕಾರ್ಯಕ್ರಮ |

| | | |
|---|---|---|
| | | ಅಲೆಮಾರಿ/ ಅರೆ ಅಲೆಮಾರಿ ಅಭಿವೃದ್ಧಿ ನಿಗಮದ ಕಾರ್ಯಕ್ರಮಗಳು :<br>1) ಸ್ವಯಂ ಉದ್ಯೋಗ ನೇರ ಸಾಲ ಯೋಜನೆ<br>2) ಅರಿವು ಶೈಕ್ಷಣಿಕ ಸಾಲ ಯೋಜನೆ<br>3) ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ ಯೋಜನೆ<br>4) ಗಂಗಾ ಕಲ್ಯಾಣ ನೀರಾವರಿ ಯೋಜನೆ<br>ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ. ಸಕಇ 225 ಬಿಸಿಎ 2000, ದಿನಾಂಕ: 30-03-2002 ರಲ್ಲಿ ಗೊಲ್ಲ ಸಮುದಾಯವನ್ನು ಹಿಂದುಳಿದ ವರ್ಗಗಳ ಪಟ್ಟಿ ಪ್ರವರ್ಗ-1ರ ಕ್ರಮ ಸಂಖ್ಯೆ.8ರಲ್ಲಿ ಸೇರಿಸಿ ಉದ್ಯೋಗ ಮತ್ತು ಶಿಕ್ಷಣದಲ್ಲಿ ಪ್ರವರ್ಗ-1ಕ್ಕೆ ಶೇಕಡ 4ರ ಮೀಸಲಾತಿ ಸೌಲಭ್ಯವನ್ನು ಕಲ್ಪಿಸಲಾಗಿರುತ್ತದೆ. |
| ಆ) | ರಾಜ್ಯದಲ್ಲಿರುವ ಒಟ್ಟಾರೆ ಗೊಲ್ಲರಹಟ್ಟಿಗಳಲ್ಲಿ ಪ್ರಾಥಮಿಕ ಕನಿಷ್ಠ ಮೂಲ ಸೌಲಭ್ಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದಲ್ಲಿ ಗೊಲ್ಲ ಸಮುದಾಯದ ಏಳಿಗೆಗಾಗಿ ಸರ್ಕಾರ ಕೈಗೊಂಡಿರುವ ಕಾರ್ಯಕ್ರಮಗಳೇನು? (ವಿವರವನ್ನು ನೀಡುವುದು) | ಗೊಲ್ಲರ ಹಟ್ಟಿಗಳನ್ನೊಳಗೊಂಡಂತೆ ಅಲೆಮಾರಿ/ ಅರೆ ಅಲೆಮಾರಿ ಸಮುದಾಯದವರ ಕಾಲೋನಿಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸಿ.ಸಿ.ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿಗಳನ್ನು ಮೂಲಭೂತ ಸೌಲಭ್ಯ ಕಾರ್ಯಕ್ರಮದಡಿ ಆಯಾ ವರ್ಷವಾರು ಲಭ್ಯವಿರುವ ಅನುದಾನಕ್ಕನುಗುಣವಾಗಿ ಕೈಗೊಳ್ಳಲಾಗುತ್ತದೆ. |

**ಸಂಖ್ಯೆ:ಹಿಂವಕ 311 ಬಿಂಎಂಎಸ್ 2023**

**(ಶಿವರಾಜ. ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು.